ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ

ಸಿ.ಸಿ.192/2024

| | | |
|---|---|---|
| ಸಾಕ್ಷಿದಾರರ ಹೆಸರು | : ಕೃಷ್ಣ | ಫ್ರಾಸಾ -4 |
| ತಂದೆಯ ಹೆಸರು | : ಪೊನ್ನುಸ್ವಾಮಿ | ಚಾಸಾ-4 |
| ವಯಸ್ಸು | : 45 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಚಾಲಕ | ದಿನಾಂಕಃ 29.07.2025. |
| ವಾಸಸ್ಥಳ | : ಬಾಪುನಗರ. | |

:ಮುಖ್ಯ ವಿಚಾರಣೆ ಫ್ರಾಜ್ಞ್ಯಾ.ಸ.ಸ.ಅ. ರವರಿಂದ:

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-1 ರಿಂದ 3 ರವರ ಪರಿಚಯ ನನಗಿಲ್ಲ. ಮೃತ ಮಂಜುನಾಥ್ ರವರ ಪರಿಚಯ ನನಗಿಲ್ಲ.

ಸಾಕ್ಷಿಯು ದಿ.14.11.2023 ರ ಅಮಾನತು ಮಹಜರಿನಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಒಂದು ಫೋಟೋ ಇರುವ ಬಗ್ಗೆ ಗುರುತಿಸುತ್ತಾರೆ. ಸದರಿ ದಾಖಲೆಯನ್ನು ನಿಪಿ-10 ಮತ್ತು 11, ಸಾಕ್ಷಿಯು ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ಒಂದು ವರ್ಷದ ಹಿಂದೆ ನಾನು ಬಿದರಹಳ್ಳಿಯಲ್ಲಿ ಇರುವಾಗ ಪೊಲೀಸರು ನನ್ನ ಸಹಿಯನ್ನು ಪಡೆದು, ಫೋಟೋ ತೆಗೆದಿರುತ್ತಾರೆ. ಯಾವ ವಿಚಾರಕ್ಕೆ ನನ್ನ ಸಹಿಗಳನ್ನು ಪಡೆದು ಫೋಟೋ ತೆಗೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-10 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನನಗೆ ಪ್ರಕರಣದ ಬಗ್ಗೆ ಬೇರೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

ಪಾಟೀ ಸವಾಲು: ಫ್ರಾಜ್ಞ್ಯಾಸ.ಸ.ಅ. ರವರಿಂದ:

ಸಾಕ್ಷಿಗೆ ನಿಪಿ-10 ರಲ್ಲಿನ ಸಂಪೂರ್ಣ ವಿಚಾರವನ್ನು ಓದಿ ಹೇಳಿದ್ದು ಸಾಕ್ಷಿಯು ಅವುಗಳನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಚಾಸಾ-1 ರವರು ಆರೋಪಿಯೊಂದಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.